**ಕಳೆದ ಬಾರಿ ಮಳೆ ಕೈಕೊಟ್ಟು ಉಂಟಾದ ಬೆಳೆ ನಷ್ಟಕ್ಕೆ ಪೂರ್ಣ ಪ್ರಮಾಣದಲ್ಲಿ ಪರಿಹಾರ ದೊರೆತಿಲ್ಲ ಎಂದು ರೈತ ಸಮೂಹ ಬೇಗುದಿಯಲ್ಲಿ ಬೇಯುತ್ತಿದೆ. ರಾಜ್ಯ ಸರ್ಕಾರ ಒಟ್ಟು 34.50 ಲಕ್ಷ ರೈತರಿಗೆ ಬೆಳೆ ನಷ್ಟ ಪರಿಹಾರ ಕೊಟ್ಟಿದ್ದು, ಆದರೆ ಶೇ.60 ರಿಂದ 70 ರಷ್ಟು ರೈತರು ಪರಿಹಾರದಿಂದ ವಂಚಿತರಾಗಿದ್ದಾರೆ. ಬೆಳೆ ನಷ್ಟ ಪರಿಹಾರ ಪಡೆದವರಿಗಿಂತ ವಂಚಿತರೇ ಹೆಚ್ಚು ಎಂದು ರೈತರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಎಸ್ ಡಿ ಆರ್ ಎಫ್ ಮಾರ್ಗಸೂಚಿ ಪ್ರಕಾರ ಪ್ರತಿ ಹೆಕ್ಟೇರ್ ಖುಷ್ಕಿ ಬೆಳೆಗೆ 8,300 ರೂ. ನೀರಾವರಿ- 17,000 ರೂ. ತೋಟಗಾರಿಕೆ ಬೆಳೆಗೆ 22,500 ರೂ. ನಿಗದಿಪಡಿಸಿ, ಗರಿಷ್ಠ ಎರಡು ಹೆಕ್ಟೇರ್‌ಗೆ ನೀಡಿದ್ದು ರೈತರು ಹೂಡಿದ ಬಂಡವಾಳಕ್ಕೆ ಹೋಲಿಸಿದರೆ ಭಿಕ್ಷೆ ಹಾಕಿದಂತಿದೆ. ಕೇಂದ್ರದ ಜತೆಗೆ ರಾಜ್ಯ ಸರ್ಕಾರವೂ ತನ್ನ ಪಾಲಿನ ಮೊತ್ತ ಸೇರಿಸಿದ್ದರೆ ಒಂದಿಷ್ಟು ಪ್ರಯೋಜನವಾಗುತ್ತಿತ್ತು. ರಾಜ್ಯ ಸರ್ಕಾರವು ಬಿಡಿಗಾಸು ಪರಿಹಾರವನ್ನು ಕೊಟ್ಟು ಕೈತೊಳೆದುಕೊಂಡಿದೆ. ಬೆಳೆ ನಷ್ಟಕ್ಕೆ ನ್ಯಾಯೋಚಿತ ಪರಿಹಾರ ಪೂರ್ಣ ಪ್ರಮಾಣದಲ್ಲಿ ಸಿಕ್ಕಿಲ್ಲ. ಮೊದಲು ಕಂತಿನಲ್ಲಿ ರಾಜ್ಯ ಸರ್ಕಾರವು ಪಾವತಿಸಿದ 2000 ರೂ. ಮೊತ್ತವನ್ನು ಕಡಿತ ಮಾಡಿ ವಿತರಿಸಿದ್ದರಿಂದ ಬಹುತೇಕ ರೈತರಿಗೆ ಪುಡಿಗಾಸು ಸಿಕ್ಕಿದೆ. ಕಿಸಾನ್ ಸಮ್ಮಾನ್ ನಿಧಿಯಡಿ 4000 ರೂ. ಕೊಡುವುದನ್ನು ಮುಂದುವರಿಸಿದ್ದರೆ ಕಷ್ಟ ಕಾಲದಲ್ಲಿ ಆಸರೆಯಾಗುತ್ತಿತ್ತು ಎನ್ನುವುದು ರೈತರ ವೇದನೆಯಾಗಿದೆ. ಕಿಸಾನ್ ಸಮ್ಮಾನ್ ನಿಧಿಯಡಿ 4 ಸಾವಿರ ರೂ. ಕೊಡುವುದನ್ನು ನಿಲ್ಲಿಸಿ ರಾಜ್ಯ ಸರ್ಕಾರವು ರೈತರನ್ನು ಸಂಕಷ್ಟಕ್ಕೆ ತಳ್ಳಿದೆ. ಸರ್ಕಾರದ ಧೋರಣೆಯಿಂದ ಅನ್ನದಾತರಿಗೆ ಬೆಳೆ ಪರಿಹಾರ ಅಪೂರ್ಣವಾಗಿ ದೊರೆತಿದ್ದು, ಸಂಕಷ್ಟದಿಂದ ಹೊರಬಾರದ ಸ್ಥಿತಿಯಲ್ಲಿದ್ದಾರೆ ಎಂಬ ವಿಷಯದ ಬಗ್ಗೆ ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಶ್ರೀ ಕೇಶವ ಪ್ರಸಾದ್.ಎಸ್, ಶ್ರೀ ನಿರಾಣಿ ಹಣಮಂತ್ ರುದ್ರಪ್ಪ ಹಾಗೂ ಶ್ರೀ ರವಿಕುಮಾರ್ ಇವರು ನಿಯಮ 330 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

2023ನೇ ಸಾಲಿನ ನೈರುತ್ಯ ಮುಂಗಾರು ಹಂಗಾಮಿನ ವೈಫಲ್ಯ / ಮಳೆಕೊರತೆ ಕಂಡು ಬಂದ ಹಿನ್ನೆಲೆಯಲ್ಲಿ, ಕೇಂದ್ರ ಸರ್ಕಾರದ ಬರ ಕೈಪಿಡಿ- 2020 ರಲ್ಲಿ ಬರ ಪರಿಸ್ಥಿತಿ ಘೋಷಿಸಲು ಅನುಸರಿಸಬೇಕಾದ ಮಾನದಂಡಗಳಂತೆ, ನಿಯಮಾನುಸಾರ ಪರಿಶೀಲಿಸಿ, ರಾಜ್ಯದ 223 ತಾಲ್ಲೂಕುಗಳನ್ನು (196 ತೀವ್ರ ಬರ & 27 ಸಾಧರಣ ಬರ) ಬರ ಪೀಡಿತ ತಾಲ್ಲೂಕುಗಳೆಂದು ಘೋಷಿಸಲಾಗಿರುತ್ತದೆ.

ರಾಜ್ಯದಲ್ಲಿ ಬರ ಪರಿಸ್ಥಿತಿ ಹಿನ್ನೆಲೆಯಲ್ಲಿ ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿ (NDRF) ಯಡಿ ಒಟ್ಟು ರೂ.18,171.44 ಸಾವಿರ ಕೋಟಿಗಳ ಆರ್ಥಿಕ ನೆರವನ್ನು ನೀಡುವಂತೆ ಕೋರಿ ಕೇಂದ್ರ ಸರ್ಕಾರಕ್ಕೆ ಮೆಮೊರಾಂಡಮ್ ಸಲ್ಲಿಸಲಾಗಿರುತ್ತದೆ.

ಭಾರತ ಸರ್ಕಾರದಿಂದ ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿಯಡಿ ಆರ್ಥಿಕ ನೆರವನ್ನು ನಿರೀಕ್ಷಿಸಿ, ಬರಪರಿಸ್ಥಿತಿಯಿಂದ ಉಂಟಾದ ಬೆಳೆ ಹಾನಿಗೆ (Input Subsidy) ಸಂಬಂಧಿಸಿದಂತೆ ಅರ್ಹ ರೈತರಿಗೆ ಗರಿಷ್ಠ 2 ಹೆಕ್ಟೇರ್‌ಗೆ ಗರಿಷ್ಠ ರೂ.2,000/- ಗಳನ್ನು ರೈತರ ಆಧಾರ್ ಜೋಡಣೆಯಾದ ಬ್ಯಾಂಕ್ ಖಾತೆಗಳಿಗೆ ನೇರವಾಗಿ ಡಿಬಿಟಿ ಮೂಲಕ ನಿಯಮಾನುಸಾರ ಅರ್ಹವಿರುವ 33,55,599 ಫಲಾನುಭವಿ ರೈತರುಗಳಿಗೆ ಒಟ್ಟು ರೂ. 6,36,44,66,128/-ಗಳನ್ನು ಬೆಳೆಹಾನಿ ಪರಿಹಾರವಾಗಿ ಪಾವತಿಸಲಾಗಿರುತ್ತದೆ.

ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿಯಿಂದ (NDRF) 2023ನೇ ಸಾಲಿನ ಮುಂಗಾರು (Kharif) ಬರ ಪರಿಹಾರಕ್ಕಾಗಿ ರೂ.3498.82 ಕೋಟಿಗಳನ್ನು ಮಂಜೂರು ಮಾಡಿ, ಈ ಪೈಕಿ ರಾಜ್ಯ ವಿಪತ್ತು ಪರಿಹಾರ ನಿಧಿಯಡಿ ದಿನಾಂಕ:01/04/2023ಕ್ಕೆ ಬಾಕಿ ಇದ್ದ ರೂ.89.20 ಕೋಟಿಗಳಲ್ಲಿ ಶೇ.50ರಷ್ಟು ಅಂದರೆ ರೂ.44.60 ಕೋಟಿಗಳನ್ನು ಪ್ರಾರಂಭಿಕ ಮೊತ್ತ ಎಂದು ಪರಿಗಣಿಸಿ ಇನ್ನುಳಿದ ಮೊತ್ತ ರೂ.3454.22 ಕೋಟಿಗಳನ್ನು ಭಾರತ ಸರ್ಕಾರದ ಆರ್ಥಿಕ ಮಂತ್ರಾಲಯವು ದಿನಾಂಕ:26.04.2024 ರ ಪತ್ರದಲ್ಲಿ, ರಾಜ್ಯಕ್ಕೆ ಬಿಡುಗಡೆ ಮಾಡಿರುತ್ತದೆ. ರೂ. 3454.22 ಕೋಟಿಗಳಲ್ಲಿ, 3266.42 ಕೋಟಿಗಳು ಬೆಳೆಹಾನಿ ಪರಿಹಾರಕ್ಕಾಗಿ ಹಾಗೂ 232.42 ಕೋಟಿಗಳು ಜೀವನೋಪಾಯ ಪರಿಹಾರಕ್ಕಾಗಿ (ಗ್ರಾಟಿಟುಯಸ್ ರಿಲೀಫ್) ಭಾರತ ಸರ್ಕಾರವು ಬಿಡುಗಡೆ ಮಾಡಿರುತ್ತದೆ.

ಬಾಧಿತ ರೈತರಿಗೆ ತ್ವರಿತವಾಗಿ ಮತ್ತು ಕ್ರಮಬದ್ಧವಾಗಿ ಬೆಳೆ ಹಾನಿ ಪರಿಹಾರವನ್ನು ವಿತರಿಸಲು FRUITS ತಂತ್ರಾಂಶದಲ್ಲಿ ನೋಂದಣಿಯಾಗಿ Farmers ID ಹೊಂದಿರುವ ಹಾಗೂ ಬರ ಘೋಷಣೆಯಾಗಿರುವ ತಾಲ್ಲೂಕುಗಳಲ್ಲಿ ಬೆಳೆಹಾನಿಗೆ ನೀಡಬಹುದಾದ ಪರಿಹಾರದ ಬಗ್ಗೆ ಭಾರತ ಸರ್ಕಾರದ ಗೃಹ ಮಂತ್ರಾಲಯವು ದಿನಾಂಕ:11/07/2023ರಂದು ಹೊರಡಿಸಿರುವ ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿ / ರಾಜ್ಯ ವಿಪತ್ತು ಪರಿಹಾರ ನಿಧಿಯ Revised Items and Norms of Assistance ಮಾರ್ಗಸೂಚಿಗಳನ್ವಯ ಒಟ್ಟಾರೆ 38,58,737 ಲಕ್ಷ ರೈತರಿಗೆ ರೂ.3535.30/-ಕೋಟಿ ಬೆಳೆಹಾನಿ ಪರಿಹಾರ (Input Subsidy)ವನ್ನು ಪಾವತಿಸಲು ಕ್ರಮವಹಿಸಲಾಗಿದೆ.

ಕೇಂದ್ರ ಸರ್ಕಾರವು ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯನ್ನು ದಿನಾಂಕ:01.12.2018 ರಿಂದ ಜಾರಿಗೊಳಿಸಿರುತ್ತದೆ ಈ ಯೋಜನೆಯಡಿ ದಿನಾಂಕ:01.02.2019 ರ ಒಳಗಾಗಿ ಭೂದಾಖಲಾತಿ ಹೊಂದಿರುವ (ಪೌತಿ ಪ್ರಕರಣಗಳಿಂದಾಗಿ 01.02.2019ರ ನಂತರ ಭೂಮಾಲೀಕತ್ವವನ್ನು ಪಡೆದವರಿಗೆ ವಿನಾಯಿತಿ ಇರುತ್ತದೆ.) ಎಲ್ಲಾ ಅರ್ಹ ರೈತ ಕುಟುಂಬಕ್ಕೆ (ಒಂದು ಕುಟುಂಬ ಎಂದರೆ ಗಂಡ, ಹೆಂಡತಿ ಮತ್ತು ಅಪ್ರಾಪ್ತ ಮಕ್ಕಳು) ಕೃಷಿ ಚಟುವಟಿಕೆಯಲ್ಲಿ ಉತ್ತಮ ಪರಿಕರಗಳನ್ನು ಬಳಸಿ ಬೆಳೆಗಳ ಆರೋಗ್ಯ ನಿರ್ವಹಣೆ ಹಾಗೂ ಹೆಚ್ಚಿನ ಇಳುವರಿ ಪಡೆದು ನಿರೀಕ್ಷಿತ ಆದಾಯಗಳಿಸಲು ನೆರವಾಗಲು ವಾರ್ಷಿಕ ರೂ.6000/-ಗಳ ಆರ್ಥಿಕ ನೆರವನ್ನು ನೀಡಲಾಗುತ್ತಿದೆ. ಸದರಿ ಅನುದಾನವನ್ನು ನಾಲ್ಕು ತಿಂಗಳಿಗೊಮ್ಮೆ ರೂ.2000/-ಗಳಂತೆ ಮೂರು ಕಂತುಗಳಲ್ಲಿ ನೀಡಲಾಗುತ್ತಿದೆ. ಕೇಂದ್ರ ಸರ್ಕಾರದ ಪಿ.ಎಂ. ಕಿಸಾನ್ ಸಮ್ಮಾನ್ ನಿಧಿ ಯೋಜನೆಯನ್ನು ರಾಜ್ಯದಲ್ಲೂ ಅನುಷ್ಠಾನಗೊಳಿಸಿದ್ದು, ರಾಜ್ಯದ ರೈತರಿಗೆ ಸರ್ಕಾರದ ವತಿಯಿಂದ ಆರ್ಥಿಕ ಬಲ ನೀಡಲು ಈ ಯೋಜನೆಗೆ ಒಳಪಟ್ಟ ಎಲ್ಲಾ ರೈತರಿಗೆ ದಿನಾಂಕ:14.08.2019 ರಿಂದ ವಾರ್ಷಿಕವಾಗಿ ರೂ.4000.00 ಗಳನ್ನು ಎರಡು ಕಂತುಗಳಲ್ಲಿ ನೀಡಲಾಗುತ್ತಿತ್ತು. 2023 ರ ವರೆಗೆ ಈ ಯೋಜನೆಯು ಜಾರಿಯಲ್ಲಿತ್ತು.

2023ರ ಮೇ ಮಾಹೆಯಲ್ಲಿ ಅಸ್ತಿತ್ವಕ್ಕೆ ಬಂದಿರುವ ನೂತನ ರಾಜ್ಯ ಸರ್ಕಾರವು ಚುನಾವಣಾ ಪೂರ್ವದಲ್ಲಿ ರಾಜ್ಯದ ಜನತೆಗೆ ನೀಡಿರುವ ಆಶ್ವಾಸನೆಗಳಂತೆ ಅನ್ನಭಾಗ್ಯ, ಶಕ್ತಿ, ಗೃಹಜ್ಯೋತಿ, ಗೃಹಲಕ್ಷ್ಮಿ ಹಾಗೂ ಯುವನಿಧಿ ಎಂಬ 05 ಪ್ರಮುಖ ಗ್ಯಾರಂಟಿ ಯೋಜನೆಗಳನ್ನು ಘೋಷಿಸಿರುತ್ತದೆ. ಈ ಗ್ಯಾರಂಟಿ ಯೋಜನೆಗಳನ್ನು ಪ್ರಮುಖವಾಗಿ ರೈತರು, ಕೂಲಿ ಕಾರ್ಮಿಕರು ಹಾಗೂ ಬಡ ಮಧ್ಯಮ ವರ್ಗಗಳನ್ನು ದೃಷ್ಟಿಯಲ್ಲಿರಿಸಿಕೊಂಡು ಜಾರಿಗೊಳಿಸಲಾಗಿರುತ್ತದೆ. ಈ ಐದು ಯೋಜನೆಗಳ ಪೈಕಿ ಗೃಹ ಲಕ್ಷ್ಮಿ ಯೋಜನೆಯಡಿ ಅರ್ಹ ಕುಟುಂಬದ ಅರ್ಹ ಗೃಹಿಣಿಗೆ ಪ್ರತಿ ತಿಂಗಳು ರೂ.2000.00 ಗಳ ಸಹಾಯಧನ ಒದಗಿಸಲಾಗುತ್ತಿದೆ. ಪಿ.ಎಂ.ಕಿಸಾನ್ ಯೋಜನೆಯಡಿ ವಾರ್ಷಿಕವಾಗಿ ರೂ.4000.00 ಸಹಾಯಧನವನ್ನು ರಾಜ್ಯ ಸರ್ಕಾರದಿಂದ ನೀಡಲಾಗುತ್ತಿತ್ತು. ಆದರೆ, ರಾಜ್ಯ ಸರ್ಕಾರದ ಪ್ರಮುಖ ಗ್ಯಾರಂಟಿ ಯೋಜನೆಯಾಗಿರುವ 'ಗೃಹ ಲಕ್ಷ್ಮಿ ಯೋಜನೆಯಡಿ ಪ್ರತಿ ಕುಟುಂಬಕ್ಕೆ ವಾರ್ಷಿಕವಾಗಿ ರೂ.24,000.00 ಸಹಾಯಧನವನ್ನು

ನೀಡಲಾಗುತ್ತಿದೆ. ಅಲ್ಲದೆ, ಗೃಹಜ್ಯೋತಿ ಯೋಜನೆಯಡಿ ರೈತ ಕುಟುಂಬಗಳೂ ಒಳಗೊಂಡಂತೆ ಎಲ್ಲಾ ಅರ್ಹ ಕುಟುಂಬಗಳಿಗೆ ಉಚಿತ ವಿದ್ಯುತ್ ನೀಡಲಾಗುತ್ತಿದೆ. ಗ್ಯಾರಂಟಿ ಯೋಜನೆಗಳಿಂದ ಪ್ರತಿ ಕುಟುಂಬಗಳಿಗೂ ಹೆಚ್ಚಿನ ಆರ್ಥಿಕ ಸಹಾಯವು ಲಭವಾಗುತ್ತಿರುವ ಹಿನ್ನೆಲೆಯಲ್ಲಿ ಪಿ.ಎಂ.ಕಿಸಾನ್ ಯೋಜನೆಯಡಿ ರಾಜ್ಯ ಸರ್ಕಾರದಿಂದ ನೀಡಲಾಗುತ್ತಿದ್ದ ಸಹಾಯಧನವನ್ನು ಸ್ಥಗಿತಗೊಳಿಸಲಾಗಿರುತ್ತದೆ.

**ಸಂಖ್ಯೆ:** ಕಂಇ 349 ಟಿಎನ್‌ಆರ್ 2024

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು